ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1962(2251)
ಮಾನ್ಯ ಸದಸ್ಯರ ಹೆಸರು	ಶ್ರೀ ಹೆಚ್.ಎಂ.ರಮೇಶ ಗೌಡ
ಉತ್ತರಿಸುವ ಸಚಿವರು	ಮಾನ್ಯ ಉನ್ನತ ಶಿಕ್ಷಣ ಸಚಿವರು
ಉತ್ತರಿಸಬೇಕಾದ ದಿನಾಂಕ	21.03.2022

ಕ್ರ. ಸಂ	ಪ್ರಶ್ನೆ	ಉತ್ತರ
ಅ	ಉನ್ನತ ಶಿಕ್ಷಣ ಇಲಾಖೆಯಲ್ಲಿ ಖಾಲಿ ಇರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ನೇರ ನೇಮಕಾತಿಯಿಂದ ಭರ್ತಿ ಮಾಡುವ ಹಲವಾರು ಕಡತಗಳು ಕಳೆದ 2 ವರ್ಷಗಳಿಂದ ವಿಲೇವಾರಿಯಾಗದೇ ಸರ್ಕಾರದ ಹಂತದಲ್ಲಿಯೇ ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ. ಕೋವಿಡ್-19 ಹಿನ್ನೆಲೆಯಲ್ಲಿ ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ:ಆಇ/3ಬಿಇಎಂ/2020 ದಿನಾಂಕ:6.7.2020ರನ್ವಯ ಆರ್ಥಿಕ ಮಿತವ್ಯಯ ಆದೇಶ ಜಾರಿಗೊಳಿಸಿದ್ದರಿಂದ ಬ್ಯಾಕ್ ಲಾಗ್ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಕಳೆದ 2 ವರ್ಷಗಳಲ್ಲಿ ಸ್ವೀಕೃತಗೊಂಡ ಪ್ರಸ್ತಾವನೆಗಳ ಪೈಕಿ ನೇಮಕಾತಿಗೆ ಸಂಬಂಧಿಸಿದಂತೆ ವಿವಿಧ ಹಂತಗಳಲ್ಲಿ ಪ್ರಸ್ತಾವನೆಗಳು ಬಾಕಿಯಿರುತ್ತವೆ.
ಆ	ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)	
ಇ)	ಕಳೆದ 2 ವರ್ಷಗಳಲ್ಲಿ ಉನ್ನತ ಶಿಕ್ಷಣ ಇಲಾಖೆಯಲ್ಲಿ ಖಾಲಿ ಇರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಕೋರಿ ಸರ್ಕಾರಕ್ಕೆ ಸಲ್ಲಿಕೆಯಾಗಿರುವ ಪ್ರಸ್ತಾವನೆಗಳ ಸಂಖ್ಯೆ ಎಷ್ಟು; ಆ ಪೈಕಿ ವಿಲೇವಾರಿಯಾದ,	ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಕಳೆದ 2 ವರ್ಷಗಳಲ್ಲಿ ಸುಮಾರು 71 ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿಮಾಡಲು ಆಡಳಿತ ಮಂಡಳಿಗಳಿಂದ ಪ್ರಸ್ತಾವನೆಗಳು ಆಯುಕ್ತಾಲಯದಲ್ಲಿ ಸ್ವೀಕೃತವಾಗಿರುತ್ತವೆ. ಆದರೆ ಆರ್ಥಿಕ ಮಿತವ್ಯಯದ ಆದೇಶ ಜಾರಿಯಲ್ಲಿರುವ ಕಾರಣ ಸದರಿ ಪ್ರಸ್ತಾವನೆಗಳು ವಿಲೇವಾರಿಯಾಗಿರುವುದಿಲ್ಲ. ಮುಂದುವರೆದು, ತಾಂತ್ರಿಕ ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ ಕಳೆದ 2 ವರ್ಷಗಳಲ್ಲಿ 4 ಅನುದಾನಿತ ಸಂಸ್ಥೆಗಳಲ್ಲಿ ಖಾಲಿಯಿರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅನುಮೋದನೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿರುತ್ತದೆ. ಸದರಿ ಹುದ್ದೆಗಳನ್ನು ಭರ್ತಿ ಮಾಡಲು

	ವಿಲೇವಾರಿಯಾಗದೇ ಇರುವ ಪ್ರಸ್ತಾವನೆಗಳೆಷ್ಟು: (ಆದೇಶವನ್ನು ಪ್ರತಿಯೊಂದಿಗೆ ವಿವರ ನೀಡುವುದು)	ಕೈಗೊಂಡ ಕ್ರಮದ ವಿವರ ಈ ಕೆಳಗಿನಂತಿದೆ. ಆರ್ಥಿಕ ಇಲಾಖೆಯ ಸಹಮತಿ ಮೇರೆಗೆ ಬಿ.ವಿ.ವಿ.ಎಸ್ ಪಾಲಿಟೆಕ್ನಿಕ್, ಬಾಗಲಕೋಟೆ ಈ ಸಂಸ್ಥೆಯಲ್ಲಿ ಖಾಲಿಯಿರುವ ಬ್ಯಾಕ್‌ಲಾಗ್ ಬೋಧಕ ಹುದ್ದೆಗಳಿಗೆ ಆಯ್ಕೆಯಾದ ಒಟ್ಟು 6 ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಲು ಸರ್ಕಾರದ ಅನುಮೋದನೆ ನೀಡಲಾಗಿದೆ.
		ಆರ್ಥಿಕ ಇಲಾಖೆಯ ಸಹಮತಿ ಮೇರೆಗೆ ಕೆ.ಹೆಚ್.ಕೆ ಪಾಲಿಟೆಕ್ನಿಕ್, ಧಾರವಾಡ ಸಂಸ್ಥೆಯಲ್ಲಿ ಖಾಲಿಯಿರುವ ವಿಜ್ಞಾನ ಉಪನ್ಯಾಸಕರ ಬ್ಯಾಕ್‌ಲಾಗ್ ಬೋಧಕ ಹುದ್ದೆ ನೇಮಕಾತಿಗೆ ಸರ್ಕಾರ ಅನುಮೋದಿಸಿರುತ್ತದೆ. ಮುಂದುವರೆದು, ಸದರಿ ಸಂಸ್ಥೆಯ 9 ಬೋಧಕೇತರ ಬ್ಯಾಕ್‌ಲಾಗ್ ಹುದ್ದೆಗಳಿಗೆ ಆಯ್ಕೆಯಾದ ಅಭ್ಯರ್ಥಿಗಳ ನೇಮಕಾತಿ ಕುರಿತಂತೆ, ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 551 ಯುಪಿಸಿ 99, ದಿನಾಂಕ:07.08.2003ರಲ್ಲಿ ಪ್ರಕಟಿಸಲಾದ Karnataka Educational Institutions (Collegiate Education) Rules, 2003 ನಿಯಮ (8)(2)ರನ್ವಯ ದಿನಾಂಕ:01.03.2001ರ ನಂತರ ನಿವೃತ್ತಿ, ನಿಧನ, ರಾಜೀನಾಮೆ ಮತ್ತು ಇತರೆ ಕಾರಣಗಳಿಂದ ಖಾಲಿ ಉಂಟಾದ ಬೋಧಕೇತರ ಹುದ್ದೆಗಳನ್ನು ವೇತನಾನುದಾನಕ್ಕೆ ಒಳಪಡಿಸಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲವೆಂದು ಸರ್ಕಾರದ ಪತ್ರ ಸಂಖ್ಯೆ:ಇಡಿ 44 ಟಿಪಿಇ 2021, ದಿನಾಂಕ: 30.10.2021ರಲ್ಲಿ ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಇವರಿಗೆ ತಿಳಿಸಲಾಗಿದೆ. ಎಸ್.ಇ.ಎಸ್ ಪಾಲಿಟೆಕ್ನಿಕ್ (ಅನುದಾನಿತ), ಸಿರಗುಪ್ಪ ಈ ಸಂಸ್ಥೆಯಲ್ಲಿ ಖಾಲಿ ಇರುವ ಸಿವಿಲ್ ಇಂಜಿನಿಯರ್ ವಿಭಾಗದ ಉಪನ್ಯಾಸಕರು ಬ್ಯಾಕ್‌ಲಾಗ್ ಹುದ್ದೆಗೆ ಮತ್ತು ಗ್ರೂಪ್ ಡಿ ಬ್ಯಾಕ್‌ಲಾಗ್ ಹುದ್ದೆಗೆ ಆಯ್ಕೆಯಾಗಿರುವ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡುವ ಕುರಿತಂತೆ ಆಯುಕ್ತಾಲಯದಿಂದ ಸ್ವೀಕೃತವಾಗಿರುವ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ:ಆಇ 02 ಬಿಇಎಂ 2021, ದಿನಾಂಕ: 24.11.2021ರನ್ವಯ ಸಹಮತಿ ಕೋರಿ ಕಡತವನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿರುತ್ತದೆ. ಜೆ.ಎಸ್.ಎಸ್ ಮಹಿಳಾ ಪಾಲಿಟೆಕ್ನಿಕ್ (ಅನುದಾನಿತ), ಮೈಸೂರು ಈ ಸಂಸ್ಥೆಯಲ್ಲಿ ಖಾಲಿಯಿರುವ 8 ಬ್ಯಾಕ್‌ಲಾಗ್ ಹುದ್ದೆಗಳಿಗೆ ಆಯ್ಕೆಯಾಗಿರುವ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಲು ಸರ್ಕಾರದ ಅನುಮೋದನೆ ಕೋರಿ ತಾಂತ್ರಿಕ ಶಿಕ್ಷಣ ಇಲಾಖೆಯ ನಿರ್ದೇಶಕರ ಪತ್ರ ಸಂಖ್ಯೆ:ಡಿಟಿಇ 12 ಇಎಸ್‌ಟಿ (4)ಬಿ 2009, ದಿನಾಂಕ:23.01.2020ರಲ್ಲಿ ಸರ್ಕಾರಕ್ಕೆ ಸಲ್ಲಿಸಿದ್ದ ಪ್ರಸ್ತಾವನೆಯ ಕೆಲವು ಅಂಶಗಳ ಬಗ್ಗೆ ಸರ್ಕಾರದ ಪತ್ರ ಸಂಖ್ಯೆ:ಇಡಿ 66 ಟಿಪಿಇ 2020, ದಿನಾಂಕ: 30.07.2021ರಲ್ಲಿ ಸ್ಪಷ್ಟೀಕರಣ ಕೋರಲಾಗಿ ಈ ಸಂಬಂಧ ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಇವರ ಪತ್ರ ದಿನಾಂಕ: 20.01.2022ರಲ್ಲಿ ಸರ್ಕಾರಕ್ಕೆ ಮರು ಪ್ರಸ್ತಾವನೆ ಸಲ್ಲಿಸಿದ್ದು, ಸದರಿ ಹುದ್ದೆಗಳ

		ನೇಮಕಾತಿಗೆ ಸರ್ಕಾರದ ಅನುಮೋದನೆ ನೀಡುವ ಸಂಬಂಧ ಸಹಮತಿ ಕೋರಿ ಕಡತವನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿದೆ. ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ವಿಶ್ವವಿದ್ಯಾಲಯಗಳಿಗೆ ಸಂಬಂಧಪಟ್ಟಂತೆ ಮಂಗಳೂರು ಮತ್ತು ಕರ್ನಾಟಕ ವಿಶ್ವವಿದ್ಯಾನಿಲಯದಿಂದ ಒಟ್ಟು 02 ಪ್ರಸ್ತಾವನೆಗಳು ಸರ್ಕಾರದಲ್ಲಿ ಸ್ವೀಕೃತವಾಗಿದ್ದು ಆರ್ಥಿಕ ಇಲಾಖೆಯ ಸಹಮತಿಗಾಗಿ ಕಳುಹಿಸಲಾಗಿದೆ.
ಈ)	ಬ್ಯಾಕ್‌ಲಾಗ್ ಹುದ್ದೆಗಳ ಕಡತಗಳನ್ನು ಶೀಘ್ರ ವಿಲೇವಾರಿ ಮಾಡುವಂತೆ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯಲ್ಲಿ ಚರ್ಚಿಸಿ ಸರ್ಕಾರಕ್ಕೆ ನಿರ್ದೇಶನ ನೀಡಿದ್ದರೂ ಸಹ ಕಡತಗಳು ವಿಲೇವಾರಿಯಾಗದೇ ವಿಳಂಬವಾಗುವುದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು? (ಕಾರಣಗಳೊಂದಿಗೆ ಸಂಪೂರ್ಣ ವಿವರ ನೀಡುವುದು)	ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಆಇ 03 ಬಿಇಎಂ 2020, ದಿನಾಂಕ:06.07.2020ರಲ್ಲಿ ಕೋವಿಡ್ 19 ಹಿನ್ನೆಲೆಯಲ್ಲಿ, 2020-21ನೇ ಸಾಲಿನ ಆರ್ಥಿಕ ವರ್ಷದಲ್ಲಿ ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳನ್ನು ಹಾಗೂ ಬ್ಯಾಕ್‌ಲಾಗ್ ಹುದ್ದೆಗಳು ಸೇರಿದಂತೆ ಎಲ್ಲಾ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ಮುಂದಿನ ಆದೇಶದವರೆಗೆ ತಡೆಹಿಡಿಯಲಾಗಿದೆ. ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ:ಆಇ 02 ಬಿಇಎಂ 2021 ದಿನಾಂಕ:24.11.2021ರಲ್ಲಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಅನುಷ್ಠಾನಗೊಳಿಸಲು ಅನುಕೂಲವಾಗುವಂತೆ ನೇರ ನೇಮಕಾತಿಯಡಿ ಬಾಕಿ ಇರುವ ಹುದ್ದೆಗಳ ನೇಮಕಾತಿ ಪ್ರಕ್ರಿಯೆಗಳನ್ನು ಮುಂದುವರೆಸಿ, ಭರ್ತಿಮಾಡಿಕೊಳ್ಳಲು ಸುತ್ತೋಲೆ ಸಂಖ್ಯೆ:ಆಇ 03 ಬಿಇಎಂ 2020, ದಿನಾಂಕ:06.07.2020ರಿಂದ ವಿನಾಯಿತಿ ನೀಡಲಾಗಿದೆ. ಅದರಂತೆ, ಕಲ್ಯಾಣ ಕರ್ನಾಟಕದ ಹುದ್ದೆಗಳನ್ನು ಭರ್ತಿಮಾಡಲು ನಿಯಮಾನುಸಾರ ಕ್ರಮವಹಿಸಲಾಗುತ್ತಿದೆ. ಉಳಿದಂತೆ, ನೇರ ನೇಮಕಾತಿ ಮೂಲಕ ಭರ್ತಿ ಮಾಡಬೇಕಾಗಿರುವ ಬೋಧಕ/ ಬೋಧಕೇತರ ಹುದ್ದೆಗಳನ್ನು ಭರ್ತಿಮಾಡುವ ಸಂಬಂಧ ಆರ್ಥಿಕ ಇಲಾಖೆಯ ನಿರ್ಬಂಧ ತೆರವಾದ ನಂತರ ನಿಯಮಾನುಸಾರ ಕ್ರಮವಹಿಸಲಾಗುವುದು.

ಇಡಿ 10 ಅಅವಿ 2022

(ಡಾ.ಅಶ್ವತ್ ನಾರಾಯಣ ಸಿ.ಎನ್.)
ಉನ್ನತ ಶಿಕ್ಷಣ, ಐ.ಟಿ ಮತ್ತು ಬಿಟಿ ವಿಜ್ಞಾನ
ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು